## 10. ಯೋಧರ ಶಕ್ತಿ ಇಡೀ ವಿಶ್ವಕ್ಕೆ ಪಸರಿಸಿದೆ

ಪಾಕಿಸ್ತಾನದೊಂದಿಗಿನ ಕಾರ್ಗಿಲ್ ಯುದ್ಧದಲ್ಲಿ ಭಾರತ ಐತಿಹಾಸಿಕ ಗೆಲುವು ಕಂಡು ಇಂದಿಗೆ 21 ವರ್ಷ ತುಂಬಿದ್ದು, ಕಾರ್ಗಿಲ್ ಯುದ್ಧದಿಂದ ನಮ್ಮ ಯೋಧರ ಶಕ್ತಿ ಇಡೀ ವಿಶ್ವಕ್ಕೆ ಪಸರಿಸಿದೆ. ಯುದ್ಧ ನಡೆದ ಸಂದರ್ಭಗಳನ್ನು ಭಾರತವು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಯೋಧರ ಬಲಿದಾನವನ್ನು ಸ್ಮರಿಸಿದ್ದಾರೆ.

ಭಾರತದ ಭೂಮಿಯನ್ನು ವಶಪಡಿಸಿಕೊಳ್ಳಲು ಮತ್ತು ಅದರ ಆಂತರಿಕ ಸಂಘರ್ಷದಿಂದ ತನ್ನ ಪ್ರಜೆಗಳ ದೃಷ್ಟಿಯನ್ನು ಬೇರೆಡೆಗೆ ತಿರುಗಿಸುವ ದುಷ್ಕೃತ್ಯ ಪಾಕಿಸ್ತಾನ ನಡೆಸಿತ್ತು. ಆದರೆ, ಅದರ ಪ್ರಯತ್ನ ವಿಫಲವಾಯಿತು ಎಂದು ಹೇಳಿದರು.

ಭಾರತವು ಪಾಕಿಸ್ತಾನದೊಂದಿಗೆ ಸೌಹಾರ್ದಯುತ ಸಂಬಂಧ ಹೊಂದಲು ಪ್ರಯತ್ನಿಸುತ್ತಿತ್ತು. ಯಾವುದೇ ಕಾರಣವಿಲ್ಲದೆ ಎಲ್ಲರೊಂದಿಗೂ ದ್ವೇಷ ಸಾಧಿಸುವುದು ದುಷ್ಟರ ಸ್ವಭಾವ ಎಂಬ ಮಾತಿನಂತೆ, ಅಂತಹ ಸ್ವಭಾವದ ಜನರು ತಮಗೆ ಒಳ್ಳೆಯದನ್ನು ಮಾಡುವವರಿಗೂ ಕೆಟ್ಟದ್ದನ್ನು ಬಯಸುತ್ತಾರೆ. ಆದೇ ರೀತಿ ಭಾರತದ ಸೌಹಾರ್ದ ಪ್ರಯತ್ನಗಳಿಗೆ ಹಿನ್ನಡೆಯಾಗುವಂತಾಗಲು ಪಾಕಿಸ್ತಾನವು ಪ್ರಯತ್ನಿಸಿತು. ಆದರೆ, ಭಾರತದ ಕೆಚ್ಚದೆಯ ಶಕ್ತಿಗಳ ಶೌರ್ಯ ಜಗತ್ತಿಗೆ ಸಾಕ್ಷಿಯಾಗಿದೆ. ನಮ್ಮ ಪಡೆಗಳು ಹೋರಾಡುತ್ತಿರುವಾಗ ಶತ್ರುಗಳು ಪರ್ವತಗಳ ಮೇಲೆ ಎತ್ತರದಲ್ಲಿದ್ದರು. ನಮ್ಮ ಪಡೆಗಳ ಮನೋಸ್ಥೈರ್ಯ ಪರ್ವತಗಳ ವಿರುದ್ಧ ಹೋರಾಡಿ ಗೆದ್ದಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಜಮ್ಮು ಕಾಶ್ಮೀರದ ಮತ್ತೊಂದು ಸ್ಫೂರ್ತಿದಾಯಕ ಉದಾಹರಣೆ ನೀಡಿದ ಪ್ರಧಾನಿ, ಆನಂತನಾಗ್ ಪುರಸಭೆ ಅಧ್ಯಕ್ಷ ಮೊಹಮ್ಮದ್ ಇಕ್ಬಾಲ್ ಕೇವಲ ರೂ.50,000 ವೆಚ್ಚದಲ್ಲಿ ಸೋಂಕು ನಿವಾರಕ ದ್ರಾವಣ ಸಿಂಪಡಿಸುವ ಯಂತ್ರವನ್ನು ಸಿದ್ಧಪಡಿಸಿದ್ದಾರೆ ಎಂದು ಶ್ಲಾಘಿಸಿದರು.

**ಮಾಸ್ಕ್ ಧರಿಸಿ ಆಯಾಸವೇ:** ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸದೆ ಓಡಾಡಬೇಡಿ ಎಂದು ಮನವಿ ಮಾಡಿಕೊಂಡ ಪ್ರಧಾನಿ ನರೇಂದ್ರ ಮೋದಿ, ಮಾಸ್ಕ್ ಧರಿಸುವುದರಿಂದ ಕೆಲವರು ಆಯಾಸಕ್ಕೆ ಒಳಗಾಗುವುದಾಗಿ ಭಾವಿಸುತ್ತಾರೆ. ಮತ್ತೆ ಕೆಲವರು ಮಾತನಾಡುವ ವೇಳೆಯಲ್ಲಿ ಮಾಸ್ಕ್ ಅನ್ನು ತೆಗೆಯುತ್ತಾರೆ. ನಿಮಗೆ ಮಾಸ್ಕ್ ತೆಗೆಯಬೇಕು ಎಂದೆನಿಸಿದಾಗಲೆಲ್ಲಾ ಕೊರೋನಾ ಯುದ್ಧದ ವಿರುದ್ಧ ಹೋರಾಡುತ್ತಿರುವ ವೈದ್ಯರು, ಶುಶ್ರೂಷಕಿಯವರು ಹಾಗೂ ಕೊರೋನಾ ಯೋಧರನ್ನು ನೆನಪಿಸಿಕೊಳ್ಳಿ, ಅವರು ನಿರಂತರವಾಗಿ ಮಾಸ್ಕ್‌ಗಳನ್ನು ಗಂಟೆಗಟ್ಟಲೆ ಧರಿಸುತ್ತಾರೆ. ಎಲ್ಲರ ಪ್ರಾಣ ಉಳಿಸಲು ಕೆಲಸ ಮಾಡುತ್ತಿದ್ದಾರೆ. ಎಂಟರಿಂದ ಹತ್ತು ಗಂಟೆಗಳ ಕಾಲ ಮಾಸ್ಕ್ ಧರಿಸುತ್ತಾರೆ ಅವರು ತೊಂದರೆಗೊಳಗಾಗುವುದಿಲ್ಲವೇ ಎಂದು ಪ್ರಧಾನಿ ಪ್ರಶ್ನಿಸಿದರು.

**ಪ್ರಧಾನಿ ಮಾತುಗಳೇನು:**

- ಈ ವರ್ಷದ ಆಗಸ್ಟ್ 15ರ ಸ್ವಾತಂತ್ರ್ಯ ದಿನದಂದು ನಾವು ಕೊರೋನಾದಿಂದ ಸ್ವಾತಂತ್ರ್ಯ ಪಡೆಯುವ ಸಂಕಲ್ಪ ಮಾಡೋಣ.
- ಕೊರೋನಾ ವೈರಸ್ ಸಾಂಕ್ರಾಮಿಕ ರೋಗದ ವಿರುದ್ಧದ ಯುದ್ಧದಲ್ಲಿ ಜನರು ಜಾಗರೂಕರಾಗಿರಬೇಕು.
- ನಾವು ಲಕ್ಷಾಂತರ ಜನರ ಪ್ರಾಣ ಉಳಿಸಲು ಸಮರ್ಥರಾಗಿದ್ದೇವೆ. ಕೊರೋನಾ ವೈರಸ್ ಬೆದರಿಕೆ ಇನ್ನೂ ಮುಗಿದಿಲ್ಲ.
- ದೇಶದ ಹಲವು ಭಾಗಗಳಲ್ಲಿ ವೇಗವಾಗಿ ಹರಡುತ್ತಿದೆ. ಇದರಿಂದ ಪಾರಾಗಲು ನಿಯಮ ಪಾಲನೆ ಅಗತ್ಯ.
- ಕೊರೋನಾ ಸಾಂಕ್ರಾಮಿಕ ರೋಗದಿಂದ ದೇಶ ಹೆಚ್ಚು ಹಾನಿಗೊಳಗಾಗಿದೆ. ಇದರ ನಡುವೆಯೂ ಸೋಂಕಿನಿಂದ ಚೇತರಿಸಿಕೊಳ್ಳುತ್ತಿರುವವರ ಸಂಖ್ಯೆಯೂ ಹೆಚ್ಚಾಗಿದೆ.

ಆಧಾರ:ವಿಜಯವಾಣಿ ದಿನಾಂಕ:27.07.2020